**ಕರ್ನಾಟಕ ಸರ್ಕಾರ**

ನಂ. ಗ್ರಾಅಪ 402 ಗ್ರಾಪಂಕಾ 2013

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ: 07.03.2014

**ಇಂದ,**

ಸರ್ಕಾರದ ಕಾರ್ಯದರ್ಶಿ,
ಗ್ರಾಮೀಣ ಅಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
**ಬೆಂಗಳೂರು.**

**ತುರ್ತು**

**ಇವರಿಗೆ,**

ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ಜಿಲ್ಲಾ ಪಂಚಾಯತ್‌ಗಳು.

**ಮಾನ್ಯರೇ,**

**ವಿಷಯ:** 1353 ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳ ನೇಮಕಾತಿ ಬಗ್ಗೆ.

**ಉಲ್ಲೇಖ:**
1. ಸರ್ಕಾರದ ಇದೇ ಸಮ ಸಂಖ್ಯೆಯ ಪತ್ರ ದಿನಾಂಕ: 03.03.2014
2. ಕಾರ್ಯದರ್ಶಿ ಕರ್ನಾಟಕ ಲೋಕ ಸೇವಾ ಆಯೋಗ, ಬೆಂಗಳೂರುರವರ ಪತ್ರ ಸಂಖ್ಯೆ:ಇ(2)2459/2013-14/ಪಿಎಸ್‌ಸಿ, ದಿನಾಂಕ: 06.03.2014

*-*-*-*-*

ಮೇಲ್ಕಂಡ ವಿಷಯ ಮತ್ತು ಉಲ್ಲೇಖಗಳ ಕಡೆಗೆ ತಮ್ಮ ಗಮನ ಸೆಳೆಯಲಾಗಿದೆ.

ಉಲ್ಲೇಖ (2) ರಲ್ಲಿ ಕಾರ್ಯದರ್ಶಿ, ಕರ್ನಾಟಕ ಲೋಕ ಸೇವಾ ಆಯೋಗ ಇವರು ಸರ್ಕಾರಕ್ಕೆ ಬರೆದಿರುವ ಪತ್ರದಲ್ಲಿ ಕರ್ನಾಟಕ ಲೋಕ ಸೇವಾ ಆಯೋಗವು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿನ 1353 ಪಂಚಾಯತಿ ಅಭಿವೃದ್ಧಿ ಅಧಿಕಾರಿ ಹುದ್ದೆಗಳಿಗೆ ಅಂತಿಮ ಆಯ್ಕೆ ಪಟ್ಟಿಯನ್ನು ದಿನಾಂಕ: 28.10.2013 ರಂದು ಪ್ರಕಟಿಸಿ, ಜಿಲ್ಲಾವಾರು ಅಭ್ಯರ್ಥಿಗಳ ಅರ್ಜಿ ಹಾಗೂ ಅಡಕಗಳನ್ನು ದಿನಾಂಕ: 05.11.2013 ರ ಪತ್ರದೊಂದಿಗೆ ಸಂಬಂಧಿಸಿದ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ರವಾನಿಸಿದೆ. ಹೆಚ್ಚುವರಿ ಪಟ್ಟಿ ಸಿದ್ಧಪಡಿಸುವ ಸಂಬಂಧ ಕರ್ತವ್ಯಕ್ಕೆ ಹಾಜರಾದ/ಹಾಜರಾಗದ ಅಭ್ಯರ್ಥಿಗಳ ವಿವರಗಳನ್ನು ನಮೂನೆ-7 ರೊಂದಿಗೆ ಆಯೋಗಕ್ಕೆ ಬೇಡಿಕೆಯನ್ನು ಸಲ್ಲಿಸಲು ಕೋರಲಾಗಿರುತ್ತದೆ.

ಮುಂದುವರೆದು, ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 26 ಸೆಹಿಮ 2002, ದಿನಾಂಕ:11.04.2003 ರನ್ವಯ ಮುಖ್ಯ ಪಟ್ಟಿಯನ್ನು ಪ್ರಕಟಿಸಿದ 6 ತಿಂಗಳವರೆಗೆ ಅಥವಾ ಪ್ರಕಟಪಡಿಸಲಾದ ಎಲ್ಲಾ ಹುದ್ದೆಗಳನ್ನು ತುಂಬುವವರೆಗೆ ಇವುಗಳಲ್ಲಿ ಯಾವುದು ಮೊದಲೋ ಅಲ್ಲಿಯವರೆಗೆ ಸಿಂಧುವಾಗಿರುತ್ತದೆ. ಅದರಂತೆ, ಮುಖ್ಯ ಪಟ್ಟಿಯಲ್ಲಿನ ಅಭ್ಯರ್ಥಿಗಳು ಕರ್ತವ್ಯಕ್ಕೆ ವರದಿ ಮಾಡಿಕೊಳ್ಳದೆ ಇದ್ದಲ್ಲಿ ಅಂತಹ ಅಭ್ಯರ್ಥಿಗಳ ನೇರ ಮತ್ತು ಸಮಾನಾಂತರ ಮೀಸಲಾತಿ ಹಾಗೂ ಇತರೆ ವಿವರಗಳೊಂದಿಗೆ ಹೆಚ್ಚುವರಿ ಅಭ್ಯರ್ಥಿಗಳನ್ನು ಆಯ್ಕೆ ಮಾಡಲು ಪ್ರಸ್ತಾವನೆಯನ್ನು ಕೋರಿದ್ದು, ಈವರೆಗೂ ಸಂಬಂಧಿತ ಪ್ರಾಧಿಕಾರಗಳಿಂದ ಬೇಡಿಕೆ ಪತ್ರ ಸ್ವೀಕೃತವಾಗಿರುವುದಿಲ್ಲ. ಆದಕಾರಣ ಹೆಚ್ಚುವರಿ ಆಯ್ಕೆ ಪಟ್ಟಿಯನ್ನು ಸಿದ್ಧಪಡಿಸಲು ನಮೂನೆ-7 ರಲ್ಲಿನ ಮಾಹಿತಿಗಳು

ಅತ್ಯಾವಶ್ಯಕವಾಗಿದ್ದು, ಪ್ರಸ್ತುತ ಹೆಚ್ಚುವರಿ ಆಯ್ಕೆ ಪಟ್ಟಿಯನ್ನು ಸಿದ್ಧಪಡಿಸುವ ಪ್ರಕ್ರಿಯೆಯನ್ನು ಕೈಗೊಳ್ಳಬೇಕಿರುವುದರಿಂದ ಕರ್ತವ್ಯಕ್ಕೆ ಹಾಜರಾದ/ಹಾಜರಾಗದ ಅಭ್ಯರ್ಥಿಗಳ ವಿವರಗಳನ್ನು ಅತಿ ಜರೂರಾಗಿ ''ನಮೂನೆ-7ರಲ್ಲಿ ವರದಿ ಮಾಡುವಂತೆ ಎಲ್ಲಾ ಜಿಲ್ಲೆಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಕ್ತ ನಿರ್ದೇಶನ ನೀಡಬೇಕೆಂದು ಕೋರಿರುತ್ತಾರೆ.

ಆದುದರಿಂದ ಹೆಚ್ಚುವರಿ ಆಯ್ಕೆ ಪಟ್ಟಿಯನ್ನು ಸಿದ್ಧಪಡಿಸಲು ನಮೂನೆ-7 ರಲ್ಲಿನ ಮಾಹಿತಿಗಳು ಅತ್ಯಾವಶ್ಯಕವಾಗಿದ್ದು, ಪ್ರಸ್ತುತ ಹೆಚ್ಚುವರಿ ಆಯ್ಕೆ ಪಟ್ಟಿಯನ್ನು ಸಿದ್ಧಪಡಿಸುವ ಪ್ರಕ್ರಿಯೆಯನ್ನು ಕೈಗೊಳ್ಳಬೇಕಿರುವುದರಿಂದ ಕರ್ತವ್ಯಕ್ಕೆ ಹಾಜರಾದ/ಹಾಜರಾಗದ ಅಭ್ಯರ್ಥಿಗಳ ವಿವರಗಳನ್ನು ಅತಿ ಜರೂರಾಗಿ ನಮೂನೆ-7ರಲ್ಲಿ ದಿನಾಂಕ: 15.03.2014 ರೊಳಗೆ ಜವಾಬ್ದಾರಿಯುತ ಅಧಿಕಾರಿ/ಸಿಬ್ಬಂದಿಯನ್ನು ನಿಯೋಜಿಸಿ ಕರ್ನಾಟಕ ಲೋಕ ಸೇವಾ ಆಯೋಗಕ್ಕೆ ವರದಿ ಮಾಡುವಂತೆ ಹಾಗೂ ಈ ದಿನಾಂಕದೊಳಗೆ ವರದಿ ಮಾಡದಿದ್ದಲ್ಲಿ ಹೆಚ್ಚುವರಿ ಆಯ್ಕೆ ಪಟ್ಟಿಯು ವ್ಯಪಗತ(ಲ್ಯಾಪ್ಸ್) ಆಗಬಹುದು. ವರದಿ ಮಾಡಿದ ಬಗ್ಗೆ ಸರ್ಕಾರಕ್ಕೆ ಮಾಹಿತಿ ಒದಗಿಸುವಂತೆ ತಮಗೆ ತಿಳಿಸಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ,

(ಕೆ. ಯಾಲಕ್ಕಿಗೌಡ) 7/3/14

ನಿರ್ದೇಶಕರು (ಪಂ.ರಾಜ್) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

7/3